## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 113
ಸದಸ್ಯರ ಹೆಸರು : ಶ್ರೀ ನಿರಾಣಿ ಹಣಮಂತ್ ರುದ್ರಪ್ಪ
ಉತ್ತರಿಸಬೇಕಾದ ದಿನಾಂಕ : 01-02-2021
ಉತ್ತರಿಸುವ ಸಚಿವರು : ಮಾನ್ಯ ಸಮಾಜ ಕಲ್ಯಾಣ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | "ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ" (KREIS-ಕ್ರೈಸ್)ವು ಇತ್ತೀಚೆಗೆ ಪ್ರಕಟಿಸಿದ ವಸತಿ ಶಾಲೆಗಳ ಸಹ ಶಿಕ್ಷಕರುಗಳ ಅಂತಿಮ ಜೇಷ್ಠತಾ ಪಟ್ಟಿಯನ್ನು "ಕರ್ನಾಟಕ ಸರ್ಕಾರಿ ನೌಕರರ 1957ರ ಜೇಷ್ಠತಾ ನಿಯಮಗಳ"ಅನುಸಾರವಾಗಿ ಎಂದು ನಡವಳಿಯಲ್ಲಿ ನಮೂದಿಸಲಾಗಿದೆಯೇ; | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಸಮಾಜ ಕಲ್ಯಾಣ ಇಲಾಖೆಯ ಅಂಗ ಸಂಸ್ಥೆಯಾಗಿದ್ದು, ಸಂಘವನ್ನು ಕರ್ನಾಟಕ ಸಹಕಾರ ಸಂಘಗಳ ನೋಂದಣಿ ಕಾಯ್ದೆ 1960 ರಡಿಯಲ್ಲಿ ದಿನಾಂಕ: 22.11.1999 ರಂದು ನೋಂದಣಿಯಾಗಿ ದಿನಾಂಕ: 02.02.2000 ರಿಂದ ಕಾರ್ಯಾರಂಭ ಮಾಡಲಾಗಿದೆ.<br><br>ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘಕ್ಕೆ ಸರ್ಕಾರದ ಆದೇಶ ಸಂಖ್ಯೆ: ಸ.ಕ.ಇ 70 ಮೋ.ದೆ.ಶ. 2010 ದಿ: 21.01.2011 ರಂದು ವೃಂದ ಮತ್ತು ನೇಮಕಾತಿ ನಿಯಮಗಳು ಜಾರಿಗೆ ಬಂದಿರುತ್ತದೆ. ಸದರಿ ವೃಂದ ಮತ್ತು ನೇಮಕಾತಿ ನಿಯಮಗಳು-2011 ರಲ್ಲಿ ಕರ್ನಾಟಕ ಸರ್ಕಾರ ನಾಗರೀಕ ಸೇವಾ (ಜೇಷ್ಠತೆ) ನಿಯಮಗಳು 1957ರನ್ನು ಅಳವಡಿಸಿಕೊಳ್ಳಲಾಗಿದೆ.<br>ಅದರಂತೆ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿರುವ ವಸತಿ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕ/ಬೋಧಕೇತರ ಖಾಯಂ ಸಿಬ್ಬಂದಿಗಳ ಅಂತಿಮ ಜೇಷ್ಠತಾ ಪಟ್ಟಿಯನ್ನು ದಿನಾಂಕ:13.11.2020 ರಂದು ಹೊರಡಿಸಲಾಗಿರುತ್ತದೆ. ಸದರಿ ಅಧಿಕೃತ ಜ್ಞಾಪನದಲ್ಲಿ "ಕರ್ನಾಟಕ ಸರ್ಕಾರಿ ನೌಕರರ 1957ರ ಜೇಷ್ಠತಾ ನಿಯಮಗಳ ಅನುಸಾರವಾಗಿ ಎಂದು ನಮೂದಿಸಲಾಗಿರುವುದಿಲ್ಲ. |
| ಆ) | "ಕ್ರೈಸ್" ಸಂಸ್ಥೆಯು ಕರ್ನಾಟಕ ಸರ್ಕಾರಿ ನೌಕರರ 1957ರ ಜೇಷ್ಠತಾ ನಿಯಮಗಳನುಸಾರ ಶಿಕ್ಷಣ ಇಲಾಖೆಯ ಪ್ರೌಢಶಾಲೆಗಳ ಸಹ ಶಿಕ್ಷಕರುಗಳ ಜೇಷ್ಠತಾ ಪಟ್ಟಿಯ ಮಾದರಿಯಂತೆ ವಸತಿ ಶಾಲೆಗಳ ಸಹ ಶಿಕ್ಷಕರುಗಳ ಜೇಷ್ಠತಾ ತಯಾರಿಸಿ ಪ್ರಕಟಿಸಿದೆಯೇ? | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಸಮಾಜ ಕಲ್ಯಾಣ ಇಲಾಖೆಯ ಅಂಗ ಸಂಸ್ಥೆಯಾಗಿದ್ದು, ಸಂಘವನ್ನು ಕರ್ನಾಟಕ ಸಹಕಾರ ಸಂಘಗಳ ನೋಂದಣಿ ಕಾಯ್ದೆ 1960 ರಡಿಯಲ್ಲಿ ದಿನಾಂಕ: 22.11.1999 ರಂದು ನೋಂದಣಿಯಾಗಿ ದಿನಾಂಕ: 02.02.2000 ರಿಂದ ಕಾರ್ಯಾರಂಭ ಮಾಡಲಾಗಿದೆ. ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘಕ್ಕೆ ಸರ್ಕಾರದ ಆದೇಶ ಸಂಖ್ಯೆ: ಸಕಇ 70 ಮೋ.ದೇ.ಶ 2010 ದಿನಾಂಕ: 21.01.2011 ರಂದು ವೃಂದ |

| | | |
|---|---|---|
| | | ಮತ್ತು ನೇಮಕಾತಿ ನಿಯಮಗಳು ಜಾರಿಗೆ ಬಂದಿದ್ದು, ಸದರಿ ವೃಂದ ಮತ್ತು ನೇಮಕಾತಿ ನಿಯಮಗಳು-2011 ರಲ್ಲಿ ಕರ್ನಾಟಕ ಸರ್ಕಾರ ನಾಗರೀಕ ಸೇವಾ (ಜೇಷ್ಠತೆ) ನಿಯಮಗಳು 1957ರನ್ನು ಅಳವಡಿಸಿಕೊಳ್ಳಲಾಗಿರುತ್ತದೆ.<br><br>ಅದರಂತೆ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿರುವ ವಸತಿ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕ/ಬೋಧಕೇತರ ಖಾಯಂ ಸಿಬ್ಬಂದಿಗಳ ಅಂತಿಮ ಜೇಷ್ಠತಾ ಪಟ್ಟಿಯನ್ನು ದಿನಾಂಕ:13.11.2020 ರಂದು ಹೊರಡಿಸಲಾಗಿರುತ್ತದೆ.<br><br>ಆದ್ದರಿಂದ ಶಿಕ್ಷಣ ಇಲಾಖೆಯ ಪ್ರೌಢಶಾಲೆಗಳ ಸಹ ಶಿಕ್ಷಕರ ಜೇಷ್ಠತಾ ಪಟ್ಟಿಯ ಮಾದರಿ ಅನ್ವಯಿಸುವುದಿಲ್ಲ. |

ಸಂಖ್ಯೆ: ಸಕಇ 15 ಮೊದೇಶಾ 2021

(ಬಿ. ಶ್ರೀರಾಮುಲು)
ಸಮಾಜ ಕಲ್ಯಾಣ ಸಚಿವರು.